# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 403(571) |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 20.02.2023 |
| ಉತ್ತರಿಸಬೇಕಾದವರು | : | ಮಾನ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ಲಾಸ್ಟಿಕ್ ಬಳಕೆಯ ಮೇಲೆ ನಿಷೇಧ ಹೇರಿ ಎಷ್ಟು ತಿಂಗಳು ಕಳೆದಿವೆ; ಯಾವಾಗ ನಿಷೇಧ ಹೇರಲಾಗಿದೆ: ಪ್ಲಾಸ್ಟಿಕ್ ಬಳಕೆಯ ನಿಷೇಧಕುರಿತು ಸೂಕ್ತ ಕ್ರಮಜರುಗಿಸಲಾಗುತ್ತಿದೆಯೇ: | ಕರ್ನಾಟಕ ರಾಜ್ಯದಲ್ಲಿ ಕೆಲ ಪ್ಲಾಸ್ಟಿಕ್ ವಸ್ತುಗಳ ಬಳಕೆಯನ್ನು ನಿಷೇಧಿಸಿ ಸರ್ಕಾರವು ದಿನಾಂಕ: 11.03.2016 ರಂದು ಅಧಿಸೂಚನೆ ಹೊರಡಿಸಿದೆ. ಈ ಅಧಿಸೂಚನೆಯನ್ವಯ ಪ್ಲಾಸ್ಟಿಕ್ ಉತ್ಪನ್ನಗಳಾದ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಪ್ಲಾಸ್ಟಿಕ್ ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ಬಳಕೆ, ತಯಾರಿಕೆ, ಸರಬರಾಜು, ಸಂಗ್ರಹಣೆ, ಸಾಗಾಣಿಕೆ, ಮಾರಾಟ ಮತ್ತು ವಿತರಣೆ ಮಾಡುವುದನ್ನು ರಾಜ್ಯಾದ್ಯಂತ ನಿಷೇಧಿಸಿದೆ.<br><br>ಮುಂದುವರೆದಂತೆ, ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯವು (MoEF ಮತ್ತು CC) "ಪಾಲಿಸ್ಟೈರೀನ್ ಮತ್ತು ವಿಸ್ತರಿತ ಪಾಲಿಸ್ಟೈರೀನ್ ಸೇರಿದಂತೆ ಏಕ ಬಳಕೆಯ ಪ್ಲಾಸ್ಟಿಕ್ (SUP) ತಯಾರಿಕೆ, ಆಮದು, ಸಂಗ್ರಹಣೆ, ವಿತರಣೆ, ಮಾರಾಟ ಮತ್ತು ಬಳಕೆಯನ್ನು ಜುಲೈ 1, 2022 ರಿಂದ ಜಾರಿಗೆ ಬರುವಂತೆ ನಿಷೇಧಿಸಿ ದಿನಾಂಕ 12ನೇ ಆಗಸ್ಟ್, 2021 ರಂದು ಪರಿಸರ (ಸಂರಕ್ಷಣಾ) ಕಾಯ್ದೆ, 1986 ರಡಿ ಅಧಿಸೂಚನೆ (G.S.R.No. 571 (E)) ಯನ್ನು ಹೊರಡಿಸಿದೆ.<br><br>ಪ್ಲಾಸ್ಟಿಕ್ ಬಳಕೆಯ ನಿಷೇಧದ ಕುರಿತು ಸರ್ಕಾರದ ವತಿಯಿಂದ ಅಗತ್ಯ ಕ್ರಮಗಳನ್ನು ಜರುಗಿಸಲಾಗುತ್ತಿದೆ. |

| | | |
|---|---|---|
| (ಆ) | ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಈ ನಿಯಮ ಕಟ್ಟುನಿಟ್ಟಾಗಿ ಜಾರಿಗೆ ಬರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮ, 2016 ಅನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಸರ್ಕಾರವು ಹಲವಾರು ಕ್ರಮಗಳನ್ನು ಜರುಗಿಸಿದೆ.<br><br>ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಮಂಡಳಿಯ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಜೊತೆಗೂಡಿ ಮಾಲ್‌ಗಳು, ಬೀದಿ ಬದಿ ವ್ಯಾಪಾರಿಗಳು, ಅಂಗಡಿ-ಮುಂಗಟ್ಟುಗಳು, ಪ್ಲಾಸ್ಟಿಕ್ ಉತ್ಪಾದಕರು, ಬಳಕೆದಾರರ ಘಟಕಗಳನ್ನು ಪರಿವೀಕ್ಷಣೆ ನಡೆಸಿ ನಿಷೇಧಿತ ಏಕ ಬಳಕೆಯ ವಸ್ತುಗಳು ಕಂಡುಬಂದಲ್ಲಿ ಅಂತಹ ವಸ್ತುಗಳನ್ನು ಮುಟ್ಟುಗೋಲು ಹಾಕಿ, ತಪ್ಪಿತಸ್ಥರ ವಿರುದ್ಧ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಸೂಚನೆಯನ್ವಯ ದಂಡವನ್ನು ವಿಧಿಸಲಾಗುತ್ತಿದೆ.<br><br>ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಪೌರಾಡಳಿತ ನಿರ್ದೇಶನಾಲಯ, ನಗರಾಭಿವೃದ್ಧಿ ಇಲಾಖೆ, ಎಲ್ಲಾ ಜಿಲ್ಲಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಸದರಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳ ಕುರಿತು ತರಬೇತಿ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳುತ್ತಿದೆ. |

**ಕಡತ ಸಂಖ್ಯೆ:** ಅಪಜೀ 30 ಇಎನ್‌ಜಿ 2023

**(ಆನಂದ್ ಸಿಂಗ್)**
ಜೀವಿಪರಿಸ್ಥಿತಿ ಮತ್ತು ಪರಿಸರ ಹಾಗೂ
ಪ್ರವಾಸೋದ್ಯಮ ಸಚಿವರು